# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಿನಾಂಕ :- 04/06/2022 ರಂದು ವಾರ್ಡ್-32ರ ನೋಡಲ್ ಅಧಿಕಾರಿರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿ

**ಸಭೆಗೆ ಹಾಜರಿದ್ದ ಅಧಿಕಾರಿಗಳು :-**

- ಶ್ರೀ. ಜಯರಾಜ್ ಕೆ.ಎಸ್, ನೋಡಲ್ ಅಧಿಕಾರಿ ವಾರ್ಡ್ ಸಂಖ್ಯೆ-32. .(ಗೈರು ಹಾಜರು)
- ಶ್ರೀ. ಬಸವರಾಜು, ವಾರ್ಡ್ ಸಹಾಯಕ ಅಭಿಯಂತರರು ವಾರ್ಡ್ ಸದಸ್ಯ ಕಾರ್ಯದರ್ಶಿ
- ಶ್ರೀ. ಅಕ್ಕಮ್ಮ, ಎಲೆಕ್ಟ್ರಿಕಲ್ ಇಂಜಿನೀಯರ್ ಬೆಸ್ಕಾಮಂ
- ಶ್ರೀ. ಸಿ.ಎಮ್ ವೆಂಕಟೇಶ್, ತೋಟಗಾರಿಕೆ ನೀರೀಕ್ಷಕರು
- ಶ್ರೀ. ದಯಾನಂದ, ಕಿರಿಯ ಆರೋಗ್ಯ ಪರೀವಿಕ್ಷಕರು

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸದಸ್ಯ ಕಾರ್ಯದರ್ಶಿ ವಾರ್ಡ್-32 ರವರು ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿದರು. ವಾರ್ಡ್-32 ರ ವಾರ್ಡ್ ಸಮಿತಿ ಸಭೆಯನ್ನು ಎಲ್. ಆರ್. ಬಂಡೆ ವಾರ್ಡ್ ಕಛೇರಿಯಲ್ಲಿ ನಡೆಸಲಾಯಿತು. ಸದಸ್ಯ ಕಾರ್ಯದರ್ಶಿರವರು ಸಭೆಯಲ್ಲಿ ಕಾರ್ಯಸೂಚಿಗಳು ಹಾಗೂ ಸಾರ್ವಜನಿಕರ ಕುಂದು ಕೋರತೆಗಳು ಅಧಿಕಾರಿಗಳ ಜೋತೆಯಲ್ಲಿ ಚರ್ಚಿಸಿದರು. ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳವ ಬಗ್ಗೆ ಸಂಬಂದಪಟ್ಟ ಅಧಿಕಾರಿ ಹಾಗೂ ನೌಕರರುಗಳಿಗೆ ತಿಳಿಸಿರುತ್ತಾರೆ.

➢ **ಕಾಮಗಾರಿ ಇಲಾಖೆಗೆ ಸಂಬಂದಿಸಿರುವುದು**

- ವಾರ್ಡ್ ವ್ಯಾಪ್ತಿಯಲ್ಲಿ ಪಾದಚಾರಿ ಮಾರ್ಗಗಳನ್ನು ಒತ್ತುವರಿ ಮಾಡಿಕೊಂಡಿರುವ ರಸ್ತೆಗಳನ್ನು ಕೂಡಲೆ ತೇರೆವುಗೋಳಿಸಲು ವಾರ್ಡ್ ಇಂಜಿನಿಯರ್‌ರವರಿಗೆ ಸೂಚಿಸಿದರು.
- ವಾರ್ಡ್ ವ್ಯಾಪ್ತಿಯ ನಂದ ಗೋಕುಲ ಲೇಔಟ್‌ನಲ್ಲಿ ಸಿ.ಸಿ. ಕ್ಯಾಮೆರಗಳು ಕಾರ್ಯ ನಿರ್ವಹಿಸುತ್ತೀಲ್ಲ ಹಾಗೂ ಹೊಸ ಕ್ಯಾಮೇರ ಪೋಲ್‌ಗಳಿಗೆ ಕ್ಯಾಮೇರ ಫಿಕ್ಸಿಂಗ್ ಮಾಡದಿರುವುದನ್ನು ಬಗ್ಗೆ ಕೂಡಲೆ ಕ್ರಮ ವಹಿಸಲು ವಾರ್ಡ್ ಇಂಜಿನಿಯರ್‌ರವರಿಗೆ ಸೂಚಿಸಿದರು.

**ಕ್ರಮ : ಈ ಮೇಲೆ ಸೂಚಿಸಿರುವಂತಹ ಸಮಸ್ಯೆಗಳಿಗೆ ಪರಿಹರಿಸುವಂತೆ ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು**

➢ **ಘನತ್ಯಾಜ್ಯ ಇಲಾಖೆಗೆ ಸಂಬಂದಿಸಿರುವುದು**

- ವಾರ್ಡ್ ವ್ಯಾಪ್ತಿಯಲ್ಲಿನ ನಂದ ಗೋಕುಲ ಲೇಔಟ್ ಮತ್ತು ಹೆಚ್.ಬಿ.ಆರ್ ಲೇಔಟ್‌ಯಲ್ಲಿ ರಸ್ತೆಗಳ ನಿರ್ವಹಣೆ ಮಾಡುತ್ತಿಲ್ಲ, ಕೂಡಲೆ ಈ ಸಮಸ್ಯೆ ಪರಿಹರಿಸಲು ಕಿರಿಯ ಆರೋಗ್ಯ ಪರೀವಿಕ್ಷಕರಿಗೆ ಸೂಚಿಸಿದರು.

- ನಂದ ಗೋಕುಲ ಲೇಔಟ್‌ರಲ್ಲಿ ಅನಧಿಕೃತವಾಗಿ ಬೇಕರಿಗಳಲ್ಲಿ ಸಿಗರೇಟ್‌ಗಳನ್ನು ಮಾರಾಟ ಮಾಡುವುದನ್ನು ಕಂಡುಬಂದಿದ್ದು ಕೂಡಲೆ ಕ್ರಮವಹಿಸಲು ಸೂಚಿಸಿದರು.

**ಕ್ರಮ : ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನತ್ಯಾಜ್ಯ) ಹಾಗೂ ಹಿರಿಯ ಆರೋಗ್ಯ ಪರೀವಿಕ್ಷಕರು & ಕಿರಿಯ ಆರೋಗ್ಯ ಪರೀವಿಕ್ಷಕರು ಈ ಮೇಲೆ ಸೂಚಿಸಿರುವ ಸಮಸ್ಯೆಗಳಿಗೆ ಕ್ರಮ ವಹಿಸುತ್ತೇನೆ ಎಂದು ಪ್ರತಿಕ್ರಿಯೆ ನೀಡಿದರು.**

➢ **ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಗೆ ಸಂಬಂಧಿಸಿರುವುದು**

- ವಾರ್ಡ್ ವ್ಯಾಪ್ತಿಯಲ್ಲಿನ ನೀರಿನ ಸಮಸ್ಯೆಗಳನ್ನು ಕೂಡಲೆ ಪರಿಹರಿಸಬೇಕಾಗಿ ಅಧಿಕಾರಿ ವರ್ಗದವರಿಗೆ ಸೂಚಿಸಿದೆ..
- ವಾರ್ಡ್ ವ್ಯಾಪ್ತಿಯಲ್ಲಿ ಅಸಮವಾಗಿರುವ ಮ್ಯಾನ್ ಹೋಲ್‌ಗಳನ್ನು ಗುರುತ್ತಿಸಿ ದುರಸ್ತಿಗೊಳಿಸಲು ಸೂಚಿಸಿದರು.

**ಕ್ರಮ : ಈ ಮೇಲೆ ಸೂಚಿಸಿರುವಂತಹ ಸಮಸ್ಯೆಗೆ ಪರಿಹರಿಸುವಂತೆ ಸಹಾಯಕ ಕಾರ್ಯಪಾಲಕ ಅಭಿಯಂತರರಿಗೆ ಈ ಸಭೆ ಮುಖಾಂತರ ಸೂಚಿಸಲಾಯಿತು.**

➢ **ಅರಣ್ಯ ಇಲಾಖೆಗೆ ಸಂಬಂದಿಸಿರುವುದು**

- ವಾರ್ಡ್ ವ್ಯಾಪ್ತಿಯ ಮರಗಳಲ್ಲಿನ ನಿರ್ಜೀವವಾದ ರೆಂಬೆ ಕೊಂಬೆಗಳಿದ್ದು ಇವುಗಳನ್ನು ಕೂಡಲೆ ತೇರುವುಗೋಳಿಸಲು ಸೂಚಿಸಿದರು.

**ಕ್ರಮ : ಈ ಮೇಲೆ ಸೂಚಿಸಿರುವಂತಹ ಸಮಸ್ಯೆಗೆ ಪರಿಹರಿಸುವಂತೆ ಅರಣ್ಯಾಧಿಕಾರಿಗಳಿಗೆ ಈ ಸಭೆ ಮುಂಖಾಂತರ ಸೂಚಿಸಲಾಯಿತು.**

➢ **ಪೊಲೀಸ್ ಇಲಾಖೆಗೆ (ಸಿವಿಲ್) ಸಂಬಂದಿಸಿರುವುದು**

- ವಾರ್ಡ್ ವ್ಯಾಪ್ತಿಯಲ್ಲಿನ ಕೆಲವು ಜಾಗಗಳಲ್ಲಿ ಗಾಂಜಾ ಹಾಗೂ ಮದ್ಯ ಕುಡಿಯುವುದು ಕಂಡುಬಂದಿದ್ದು ಕೂಡಲೆ ಕ್ರಮ ಕೈಗೊಳ್ಳಲು ಅಧಿಕಾರಿ ವರ್ಗದವರಿಗೆ ಸೂಚಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿ ಕಳ್ಳತನ ಹೆಚ್ಚಾಗುತ್ತಿದ್ದು ಪೊಲೀಸ್ ಬೀಟ್ ಹಾಕುವುದನ್ನು ಹೆಚ್ಚಿಸಲು ಅಧಿಕಾರಿ ವರ್ಗದವರಿಗೆ ಸೂಚಿಸಿದರು.

**ಕ್ರಮ : ಪೊಲೀಸ್ ಇನ್ಸ್‌ಪೆಕ್ಟರ್ (ಕೆ.ಜಿ. ಹಳ್ಳಿ ) & ಪೊಲೀಸ್ ಇನ್ಸ್‌ಪೆಕ್ಟರ್ (ಆರ್.ಟಿ ನಗರ) ರವರಿಗೆ ಈ ಮೇಲೆ ಸೂಚಿಸಿರುವ ಸಮಸ್ಯೆಗಳಿಗೆ ಕೂಡಲೆ ಕ್ರಮ ವಹಿಸಲು ಈ ಸಭೆ ಮುಖಾಂತರ ಸೂಚಿಸಿದರು.**

ಈ ಎಲ್ಲಾ ವಿಷಯಗಳ ಬಗ್ಗೆ ತುರ್ತಾಗಿ ಕ್ರಮ ಕೈಗೊಳ್ಳಲು ಸಂಬಂದಪಟ್ಟವರಿಗೆ ಸೂಚಿಸುತ್ತಾ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಿದೆ.

**ನೋಡಲ್ ಅಧಿಕಾರಿ/ ಸದಸ್ಯ ಕಾರ್ಯದರ್ಶಿ**
**ವಾರ್ಡ್–32**

**ಪ್ರತಿಗಳನ್ನು:**

- **ಮಾನ್ಯ ಆಡಳಿತಾಧಿಕಾರಿರವರ ಅಪ್ತ ಶಾಖೆಗೆ ಸಲ್ಲಿಸಿ ಆಡಳಿತಾಧಿಕಾರಿರವರ ಗಮನಕ್ಕೆ ತರಲು ಕೋರಿದೆ.**
- **ಮಾನ್ಯ ಆಯುಕ್ತರುರವರ ಅಪ್ತಶಾಖೆಗೆ ಸಲ್ಲಿಸಿ ಆಯುಕ್ತರವರ ಗಮನಕ್ಕೆ ತರಲು ಕೋರಿದೆ**
- **ಮಾನ್ಯ ವಲಯ ಆಯುಕ್ತರುರವರ ಅಪ್ತಶಾಖೆಗೆ ಸಲ್ಲಿಸಿ ಆಯುಕ್ತರವರ ಗಮನಕ್ಕೆ ತರಲು ಕೋರಿದೆ.**
- **ಮಾನ್ಯ ಜಂಟಿ ಆಯುಕ್ತರು (ಪೂರ್ವ) ರವರ ಅಪ್ತಶಾಖೆಗೆ ಸಲ್ಲಿಸಿ ಆಯುಕ್ತರವರ ಗಮನಕ್ಕೆ ತರಲು ಕೋರಿದೆ.**

- ಮುಖ್ಯ ಅಭೀಯಂತರರು (ಪೂರ್ವ) ರವರ ಮಾಹಿತಿಗಾಗಿ ಸಲ್ಲಿಸಿದೆ.
- ಕಾರ್ಯಪಾಲಕ ಅಭಿಯಂತರರು, ಮಲಿಕೇಶಿನಗರ ರವರ ಮಾಹಿತಿಗಾಗಿ ಸಲ್ಲಿಸಿದೆ.
- ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೆ.ಜಿ.ಹಳ್ಳಿ ಉಪ–ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
- ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನ ತ್ಯಾಜ್ಯ) ಮಲಕೇಶಿನಗರ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
- ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) ನೇತಾಜಿ ರಸ್ತೆ, ರವರ ಮಾಹಿತಿಗಾಗಿ ಸಲ್ಲಿಸಿದೆ.
- ಪೋಲೀಸ್ ಇನ್ಸ್‌ಪೆಕ್ಟರ್ (ಸಿವಿಲ್) ಕೆ.ಜಿ.ಹಳ್ಳಿ ರವರ ಮಾಹಿತಿಗಾಗಿ ಸಲ್ಲಿಸಿದೆ.
- ಪೋಲೀಸ್ ಇನ್ಸ್‌ಪೆಕ್ಟರ್ (ಸಿವಿಲ್) ಆರ್.ಟಿ.ನಗರ ರವರ ಮಾಹಿತಿಗಾಗಿ ಸಲ್ಲಿಸಿದೆ.
- ಪೋಲೀಸ್ ಇನ್ಸ್‌ಪೆಕ್ಟರ್ (ಟ್ರಾಫಿಕ್) ಕೆ.ಜಿ.ಹಳ್ಳಿ ರವರ ಮಾಹಿತಿಗಾಗಿ ಸಲ್ಲಿಸಿದೆ.
- ಪೋಲೀಸ್ ಇನ್ಸ್‌ಪೆಕ್ಟರ್(ಟ್ರಾಫಿಕ್) ಆರ್.ಟಿ.ನಗರ ರವರ ಮಾಹಿತಿಗಾಗಿ ಸಲ್ಲಿಸಿದೆ.
- ಕಛೇರಿ ಪ್ರತಿ.